



ಅರುಣ ಪಿ. ಭಟ್ಟ


## ವಾರಭವಿಷ್ಯ: 27.03.2025ರಿಂದ 02.04.2025ರವರೆಗೆ




ಭೂ ವ್ಯವಹಾರಗಳಲ್ಲಿ ಒಳ್ಳೆಯ ಲಾಭ ಗಳಿಸುವ ಅವಕಾಶ ಇದೆ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆಗಳಿವೆ. ಯಾವುದೇ ಮುಖ್ಯ ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ಪರಿಶೀಲನೆ ನಡೆಸಿ. ವಸ್ತುಗಳನ್ನು ಖರೀದಿ ಮಾಡಲು ಹೆಚ್ಚಿನ ಖರ್ಚು ಮಾಡಲಿದ್ದೀರಿ. ಕೆಲವರಿಗೆ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ ಹೆಚ್ಚಿದೆ. ಶುಭದಿನ: 28. ಹನುಮಾನ್ ಚಾಲೀಸ್ ಓದಿರಿ.

ನೀವು ನಂಬಿದ ವಿಚಾರಗಳನ್ನು ಪ್ರಸ್ತುತಪಡಿಸುವುದಕ್ಕೆ ಬಹಳ ಶ್ರಮಪಡುತ್ತೀರಿ. ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ಮರಳಿ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಕಾಗದ ದಾಖಲೆ ಪತ್ರಗಳನ್ನು ಕಳೆದುಕೊಳ್ಳುವ ಸಾಧ್ಯತೆ ಇದೆ. ಅಂಥ ಜವಾಬ್ದಾರಿ ವಹಿಸಿಕೊಳ್ಳಬೇಡಿ. ಶುಭದಿನ: 29. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಶುಭದಿನ: 30. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.

ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶ ಹೆಚ್ಚಿದೆ. ಕ್ರೀಡಾ ಕ್ಷೇತ್ರದಲ್ಲಿ ಪ್ರಯತ್ನ ಮಾಡುತ್ತಿರುವವರು ಸರಿಯಾದ ದಾರಿಯಲ್ಲಿ ಸಿದ್ಧತೆ ನಡೆಸುವುದರಿಂದ ಯಶಸ್ಸು ಪಡೆಯುವ ಅವಕಾಶ ಹೆಚ್ಚಾಗಿರುತ್ತದೆ. ಶುಭದಿನ: 01. ವಿಷ್ಣುಸಹಸ್ರನಾಮ ಓದಿರಿ.









ನಿಮ್ಮ ವೈಯಕ್ತಿಕ ವರ್ಚಸ್ಸಿನ ನೆರವಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿಸುವ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ: 30. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.

ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ. ನಿಮಗೂ ಕೆಮ್ಮು, ನೆಗಡಿಯಂಥ ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ನಿಮ್ಮ ಮಕ್ಕಳ ಪ್ರಗತಿಯಿಂದ ಹೆಮ್ಮೆ– ಸಂತೋಷ ಉಂಟಾಗುತ್ತದೆ. ನಿಮ್ಮಿಂದ ಸಾಲ ಪಡೆದವರು ಇಲ್ಲವೇ ನಿಮಗೆ ಹಣ ಬರಬೇಕಾಗಿದ್ದಲ್ಲಿ ಬರುವ ಅವಕಾಶ ಹೆಚ್ಚಿರುತ್ತದೆ. ಶುಭದಿನ: 29. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ನಿಮ್ಮ ಪಾಲಿಗೆ ಬರಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆದರೂ ನಿಮ್ಮಲ್ಲಿ ಸಂತೋಷ ಇರುತ್ತದೆ. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರರ ಜೊತೆಗೆ ಬಾಂಧವ್ಯ ಉತ್ತಮವಾಗುತ್ತದೆ. ಶುಭದಿನ 30. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.


ಹೊಸದಾಗಿ ಮನೆ ಕಟ್ಟಬೇಕು ಎಂದು ಆಲೋಚನೆ ಮಾಡುತ್ತಿರುವವರಿಗೆ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಸೂಕ್ತ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜೊತೆ ಉತ್ತಮ ಸಂಬಂಧ ಇರುತ್ತದೆ. ಪ್ರೀತಿಯಲ್ಲಿ ಇರುವವರು ಸಂಗಾತಿ ಜೊತೆ ಪ್ರಮುಖ ವಿಚಾರಗಳನ್ನು ಚರ್ಚೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆ ಕಾಣುತ್ತೀರಿ. ಶುಭದಿನ: 02. ಶಿವಪೂಜೆ, ಶಿವಪಂಚಾಕ್ಷರ ಸ್ತೋತ್ರ ಪಠಿಸಿರಿ.





ಉದ್ಯೋಗಸ್ಥರಿಗೆ ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಸ್ಥರಿಗೆ ಸಮಸ್ಯೆಗಳು ಎದುರಾಗುವ ಸಂಭವ ಹೆಚ್ಚಿದೆ. ಹವಾಮಾನ ವೈಪರೀತ್ಯದಿಂದ ದೇಹ ಬಾಧೆ ಕಾಣಿಸಿಕೊಳ್ಳಬಹುದು. ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜೊತೆಗೆ ಸುಮಧುರ ಕ್ಷಣ ಅನುಭವಿಸಲಿದ್ದೀರಿ. ಭೂಮಿ ಖರೀದಿಸಬೇಕು ಎನ್ನುವ ನಿಮ್ಮ ಒತ್ತಾಸೆಗೆ ಇದು ಒಳ್ಳೆಯ ಸಮಯ. ಶುಭದಿನ: 29. ದೇವ್ಯಪರಾಧ ಕ್ಷಮಾಪಣ ಸ್ತೋತ್ರ ಪಠಿಸಿರಿ.

ಸಾಮಾಜಿಕವಾಗಿ ಉತ್ತಮ ಹೆಸರು ಮಾಡಲು ಅದ್ಭುತವಾದ ಅವಕಾಶಗಳು ದೊರೆಯುತ್ತವೆ. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ ವ್ಯಾಸಂಗ ಮಾಡಿ. ಕೋರ್ಟ್ ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಸಮಯದ ಅಭಾವ ಕಾಡಲಿದೆ. ಶುಭದಿನ: 28. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮವಾದ ಪ್ರಗತಿ ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ. ಉತ್ತಮವಾದದ್ದನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಸಂಬಂಧಗಳನ್ನು ಹುಡುಕುತ್ತಿದ್ದಲ್ಲಿ ಯಶಸ್ಸು ಸಿಗಬಹುದು. ಶುಭದಿನ: 30. ಶ್ರೀಲಕ್ಷ್ಮೀನರಸಿಂಹ ಪಂಚರತ್ನ ಸ್ತೋತ್ರ ಪಠಿಸಿರಿ.

ವಾರ ಪೂರ್ತಿ ಕೆಲಸ, ಕೆಲಸ ಅಂತ ಕೆಲಸದಲ್ಲೇ ವ್ಯಸ್ತರಾಗುವಿರಿ. ಈ ಮಧ್ಯೆ ಶ್ವಾಸಕೋಶ ಸಮಸ್ಯೆ ಹಾಗೂ ರಕ್ತದಲ್ಲಿನ ದೋಷದಿಂದ ಅನಾರೋಗ್ಯ ಉಂಟಾಗುವ ಸಂಭವವಿದೆ. ಮನೆಯಲ್ಲಿ ಶುಭ ಕಾರ್ಯವೊಂದನ್ನು ಆಯೋಜಿಸುವಿರಿ. ಉದ್ಯೋಗಿಗಳಿಗೆ ನೀವು ಪಟ್ಟ ಶ್ರಮಕ್ಕೆ ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ಆದಾಯದಲ್ಲಿ ಹೆಚ್ಚಳ ಆಗಲಿದೆ. ಶುಭದಿನ: 29. ಲಿಂಗಾಷ್ಟಕ ಪಠಿಸಿರಿ.

